# ಶಿಕ್ಷಕರ ಬೇಡಿಕೆ ಈಡೇರಿಸಲು ಉನ್ನತ ಮಟ್ಟದ ಪ್ರತ್ಯೇಕ ಸಭೆ

## ಅಂತಾರಾಷ್ಟ್ರೀಯ ಶಿಕ್ಷಕ ದಿನೋತ್ಸವದಲ್ಲಿ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾಹಿತಿ

• **ಕನ್ನಡಪ್ರಭ ವಾರ್ತೆ** ಧಾರವಾಡ

ಪ್ರಾಥಮಿಕ, ಪ್ರೌಢ, ಪದವಿಪೂರ್ವ, ಪದವಿ ಮತ್ತು ವಿಶ್ವವಿದ್ಯಾಲಯಗಳ ಶಿಕ್ಷಕರ ಅನೇಕ ಸಮಸ್ಯೆಗಳ ಅರಿವು ತಮಗಿದೆ. ಎಲ್ಲ ಶಿಕ್ಷಕರ ಸಮಸ್ಯೆಗಳ ಪರಿಹಾರಕ್ಕೆ ಸರ್ಕಾರದ ಹಂತದಲ್ಲಿ ತಾವು ಪ್ರಾಮಾಣಿಕವಾಗಿ ಸ್ಪಂದಿಸುವುದಾಗಿ ವಿಧಾನಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ಇಲ್ಲಿಯ ಕರ್ನಾಟಕ ವಿದ್ಯಾವರ್ಧಕ ಸಂಘದ ಸಭಾಭವನದಲ್ಲಿ ರಾಜ್ಯ ಸರ್ಕಾರಿ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಜಿಲ್ಲಾ ಘಟಕ ಹಮ್ಮಿಕೊಂಡಿದ್ದ ಅಂತಾರಾಷ್ಟ್ರೀಯ ಶಿಕ್ಷಕ ದಿನೋತ್ಸವ ಉದ್ಘಾಟಿಸಿದ ಅವರು, ಕಳೆದ 42 ವರ್ಷಗಳಲ್ಲಿ ಎಲ್ಲ ಹಂತಗಳ ಶಿಕ್ಷಕರ ನ್ಯಾಯಯುತ ಬೇಡಿಕೆಗಳ ಈಡೇರಿಕೆಗೆ ಶ್ರಮಿಸಿದ್ದೇನೆ. ಪ್ರಸ್ತುತ ಸಭಾಪತಿ ಹುದ್ದೆಯ ಅಧಿಕಾರದ ಮೂಲಕ ಬರುವ ದಿನಗಳಲ್ಲಿ ಶಿಕ್ಷಕರ ಬೇಡಿಕೆಗಳ ಈಡೇರಿಕೆಗಾಗಿ ಉನ್ನತ ಮಟ್ಟದ ಪ್ರತ್ಯೇಕ ಸಭೆ ಜರುಗಿಸಿ ಪರಿಹಾರ ಒದಗಿಸುವ ಭರವಸೆ ನೀಡಿದರು.

ಉಪ್ಪಿನಬೆಟಗೇರಿ ವಿರಕ್ತಮಠದ ಕುಮಾರ ವಿರೂಪಾಕ್ಷ ಸ್ವಾಮೀಜಿ ಆಶೀರ್ವಚನ ನೀಡಿ, ಮನುಕುಲಕ್ಕೆ ಅಗತ್ಯ ಬೇಕಾದ ಅಕ್ಷರ, ಸಂಸ್ಕೃತಿ ಮತ್ತು ಮೌಲ್ಯಗಳನ್ನು ಬೋಧಿಸುವ ಶಿಕ್ಷಕರ ಸೇವೆಯ ಸ್ಮರಣೆ ನಿರಂತರವಾಗಿ ನಡೆಯಲಿ ಎಂದರು. ಮಾಜಿ ಶಾಸಕಿ ಸೀಮಾ ಮಸೂತಿ, ಪಾಲಿಕೆ ಸದಸ್ಯ ಈರೇಶ ಅಂಚಟಗೇರಿ, ಶಿಕ್ಷಕರ ಸಂಘದ ಅಧ್ಯಕ್ಷ ಗುರು ತಿಗಡಿ, ಜೀವನ ಶಿಕ್ಷಣ ಮಾಸಪತ್ರಿಕೆ ಡಾ. ಗುರುಮೂರ್ತಿ ಯರಗಂಬಳಿಮಠ ಹಾಗೂ ಶಿಕ್ಷಕಿ ಶಕುಂತಲಾ ಅರಮನಿ ಮಾತನಾಡಿದರು. ಶಿಕ್ಷಣ ಇಲಾಖೆ ಅಧಿಕಾರಿಗಳಾದ ಮೋಹನಕುಮಾರ ಹಂಚಾಟೆ, ಗಿರೀಶ ಪದಕಿ, ಉಮೇಶ ಬಮ್ಮಕ್ಕನವರ, ಎ.ಎ. ಖಾಜಿ, ಸುರೇಶ ಹುಗ್ಗಿ, ಎಸ್.ಎಂ. ಹುಡೇದಮನಿ ಮತ್ತಿತರರು ಇದ್ದರು. ಪ್ರಾಥಮಿಕ ಶಾಲಾ ಶಿಕ್ಷಕರ ವಿವಿಧ ಬೇಡಿಕೆಗಳ ಈಡೇರಿಕೆಗಾಗಿ ಸಂಘದ ವತಿಯಿಂದ ಮನವಿ ಸಲ್ಲಿಸಲಾಯಿತು.

**ಅಭಿನಂದನೆ:** ಮೇಲ್ಮನೆ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಸಂಘದ ವತಿಯಿಂದ ಗೌರವಿಸಿ ಅಭಿನಂದಿಸಲಾಯಿತು. ಗ್ರಾಪಂ ಸದಸ್ಯರಾದ ಸಿ.ಎಂ. ಕಿತ್ತೂರ ಮತ್ತು ಭೀಮಪ್ಪ ಕಾಸಾಯಿ, ಎಚ್.ಎಸ್. ಬಡಿಗೇರ, ನಾರಾಯಣ ಭಜಂತ್ರಿ, ಪ್ರೇಮಾ ಅರಟ್ಟಿ, ಸುಮಿತಾ ಹಿರೇಮಠ, ಕೆ.ಎಲ್. ಕರ್ಚಕಟ್ಟಿ, ಎಂ.ಜಿ. ಸುಬೇದಾರ ಅವರನ್ನು ಸನ್ಮಾನಿಸಲಾಯಿತು. ಇದೇ ಸಂದರ್ಭದಲ್ಲಿ ಜಿಲ್ಲೆಯ ಉತ್ತಮ ಶಿಕ್ಷಕರು ಹಾಗೂ ಶಾಲೆಗಳಿಗೆ ಪ್ರಶಸ್ತಿ ನೀಡಲಾಯಿತು.

KP



ಕಾರ್ಯಕ್ರಮದಲ್ಲಿ ವಿಪ ಸಭಾಪತಿ ಬಸವರಾಜ ಹೊರಟ್ಟಿ ಅವರನ್ನು ಅಭಿನಂದಿಸಲಾಯಿತು.

### ಹಿರೇಮಠ ಕಾರ್ಯವೈಖರಿಗೆ ಅಸಮಾಧಾನ

**ಹುಬ್ಬಳ್ಳಿ:** ಶಿಕ್ಷಣ ಇಲಾಖೆ ಅಪರ ಆಯುಕ್ತ ಮೇಜರ್ ಸಿದ್ದಲಿಂಗಯ್ಯ ಹಿರೇಮಠ ಕಾರ್ಯವೈಖರಿಗೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಇವರಿಂದ ಖಾಸಗಿ ಶಿಕ್ಷಣ ಸಂಸ್ಥೆ ಹಾಗೂ ಶಿಕ್ಷಕರು ಕಿರುಕುಳ ಅನುಭವಿಸುವಂತಾಗಿದೆ ಎಂದು ಕಿಡಿಕಾರಿದ್ದಾರೆ. ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿ, ಹಿರೇಮಠರ ಕಾರ್ಯವೈಖರಿಗೆ ಎಲ್ಲೆಡೆ ಅಸಮಾಧಾನ ವ್ಯಕ್ತವಾಗಿದೆ. ಮೂರು ಜಿಲ್ಲೆಗಳ ಮಂತ್ರಿಗಳು ಇವರು ಬೇಡ ಎಂದು ಈಗಾಗಲೇ ಪತ್ರ ಬರೆದಿದ್ದಾರೆ. ಆದರೂ, ಸರ್ಕಾರ ಮಾತ್ರ ಇವರನ್ನು ವರ್ಗಾವಣೆ ಮಾಡುತ್ತಿಲ್ಲ, ಏಕೆ ಎಂಬುದು ಗೊತ್ತಾಗುತ್ತಿಲ್ಲ ಎಂದು ನುಡಿದರು. ಖಾಸಗಿ ಶಿಕ್ಷಣ ಸಂಸ್ಥೆಯಲ್ಲಿ ಶಿಕ್ಷಕರ ನೇಮಕ ಮಾಡಿಕೊಳ್ಳುವ ವಿಷಯದಲ್ಲಿ ವಿನಾಕಾರಣ ಕಿರಿಕಿರಿ ಮಾಡುತ್ತಾರೆ. ಜಾಹೀರಾತು ನೀಡುವ ಕುರಿತು ಕಿರಿಕಿರಿ ಮಾಡುತ್ತಾರೆ. ಇಂತಹದ್ದೇ ರಾಜ್ಯಮಟ್ಟದ ಪತ್ರಿಕೆಗೆ ಜಾಹೀರಾತು ನೀಡಬೇಕೆಂದು ಒತ್ತಡ ಹೇರುತ್ತಾರೆ. ಇದು ಎಷ್ಟರ ಮಟ್ಟಿಗೆ ಸರಿ. ಶಿಕ್ಷಕರ ಹುದ್ದೆ ಖಾಲಿಯಾದ ಎಂಟತ್ತು ವರ್ಷದ ಮೇಲೆ ಭರ್ತಿ ಮಾಡಲು ಅವಕಾಶ ನೀಡಲಾಗುತ್ತದೆ. ಹೀಗೆ ಖಾಲಿಯಾಗಿದ್ದ ಹುದ್ದೆಗಳಲ್ಲಿ ಕೆಲವರು ಹೆಚ್ಚಿನ ಫಲಾಪೇಕ್ಷೆ ಇಲ್ಲದೇ ಕೆಲಸ ನಿರ್ವಹಿಸುತ್ತಿರುತ್ತಾರೆ. ಅಂಥವರಿಗೆ ಆಯುಕ್ತರ ಇಂಥ ಕಿರಿಕಿರಿಯಿಂದ ನ್ಯಾಯ ಒದಗಿಸುವುದು ಶಿಕ್ಷಣ ಸಂಸ್ಥೆಗಳಿಗೆ ಕಷ್ಟವಾಗುತ್ತಿದೆ. ಈ ಬಗ್ಗೆ ಎಷ್ಟೋ ಶಿಕ್ಷಣ ಸಂಸ್ಥೆಗಳ ಮುಖ್ಯಸ್ಥರು ತಮ್ಮ ಮುಂದೆ ಅಳಲು ತೋಡಿಕೊಂಡಿರುವುದುಂಟು ಎಂದು ನುಡಿದರು.

# 10ರಿಂದ ಶಿಕ್ಷಕಿಯರಿಗೆ ಸ್ತನ ಕ್ಯಾನ್ಸರ್ ಪರೀಕ್ಷಾ ಶಿಬಿರ

**ಹುಬ್ಬಳ್ಳಿ:** ಅವ್ವ ಸೇವಾ ಟ್ರಸ್ಟ್ ಮತ್ತು ಎಚ್.ಸಿ.ಜಿ. ಎನ್.ಎಂ.ಆರ್ ಕ್ಯಾನ್ಸರ್ ಆಸ್ಪತ್ರೆ ವತಿಯಿಂದ ಶಿಕ್ಷಕಿಯರಿಗೆ ಸ್ತನ ಕ್ಯಾನ್ಸರ್ ಕುರಿತು ಉಚಿತ ಥರ್ಮಲ್ ಪರೀಕ್ಷಾ ಶಿಬಿರ ನಗರದ ಆರ್.ಎನ್. ಶೆಟ್ಟಿ ಕಲ್ಯಾಣ ಮಂಟಪದಲ್ಲಿ ಅ. 10ರಿಂದ ನಡೆಯಲಿದೆ. ಶಿಬಿರ ಅಕ್ಟೋಬರ್ ತಿಂಗಳಿಡೀ ನಡೆಯಲಿದೆ ಎಂದು ವಿಧಾನಪರಿಷತ್ ಸಭಾಪತಿ, ಅವ್ವ ಸೇವಾ ಟ್ರಸ್ಟ್ ಅಧ್ಯಕ್ಷ ಬಸವರಾಜ ಹೊರಟ್ಟಿ ತಿಳಿಸಿದರು.

ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ, ಒಂದು ತಿಂಗಳ ಪರ್ಯಂತ ಥರ್ಮಲ್ ಪರೀಕ್ಷಾ ಶಿಬಿರ ನಡೆಯಲಿದ್ದು, ಶಿಕ್ಷಕಿಯರು ಅದರ ಪ್ರಯೋಜನ ಪಡೆದುಕೊಳ್ಳಬಹುದು. ಮೊದಲ ಹಂತದಲ್ಲಿ ಧಾರವಾಡ, ಗದಗ, ಹಾವೇರಿ ಮತ್ತು ಉತ್ತರ ಕನ್ನಡ ಜಿಲ್ಲೆಯಲ್ಲಿ ಶಿಬಿರ ನಡೆಯಲಿದೆ. ಎರಡನೇ ಹಂತದಲ್ಲಿ ಬೆಳಗಾವಿ, ಬಾಗಲಕೋಟೆ ಮತ್ತು ವಿಜಯಪುರದಲ್ಲಿ ಹಮ್ಮಿಕೊಳ್ಳಲಾಗುವುದು ಎಂದರು.

ಅವ್ವ ಸೇವಾ ಟ್ರಸ್ಟ್ ಕಳೆದ 12 ವರ್ಷಗಳಿಂದ ರಾಜ್ಯಾದ್ಯಂತ ಹಲವಾರು ಸಾಮಾಜಿಕ ಕಾರ್ಯ ಮಾಡುತ್ತಿದೆ. ಶೈಕ್ಷಣಿಕ, ಸಾಂಸ್ಕೃತಿಕ, ಪ್ರತಿಭಾ ಪುರಸ್ಕಾರ, ಕಡುಬಡವ ಜನರು ಆರ್ಥಿಕವಾಗಿ ಸದೃಢಗೊಂಡು ಬದುಕು ಕಟ್ಟಿಕೊಳ್ಳಲು ಪ್ರೋತ್ಸಾಹಿಸುವ ಕೆಲಸ ಮಾಡುತ್ತಿದೆ. ಇದೀಗ ದೇಶದಲ್ಲಿ ಸ್ತನ ಕ್ಯಾನ್ಸರ್ ಹೆಚ್ಚಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜನರಲ್ಲಿ ಜಾಗೃತಿ, ಚಿಕಿತ್ಸೆ ಕುರಿತು ಅರಿವು ಮೂಡಿಸುವ ಸಲುವಾಗಿ ಈ ಸಲ ಸ್ತನ ಕ್ಯಾನ್ಸರ್ ಕುರಿತು ಮುಂಜಾಗ್ರತಾ, ಉಚಿತ ಥರ್ಮಲ್ ಪರೀಕ್ಷಾ ಶಿಬಿರ ಹಮ್ಮಿಕೊಂಡಿದೆ. ಎಚ್.ಸಿ.ಜಿ.ಎನ್ ಎಂ.ಆರ್.ಕ್ಯಾನ್ಸರ್ ಆಸ್ಪತ್ರೆಯ ಸಿಇಒ ಡಾ. ಜಯಕಿಶನ್ ಮಾತನಾಡಿ, ಭಾರತೀಯ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಒಂದನೇ ಸ್ಥಾನದಲ್ಲಿದೆ. ಪ್ರತಿ ಒಂದು ಲಕ್ಷ ಮಹಿಳೆಯರಲ್ಲಿ 26 ಮಹಿಳೆಯರು ಕ್ಯಾನ್ಸರ್‌ಗೆ ಪೀಡಿತರಾಗುವ ಸಂಗತಿ ಬೆಳಕಿಗೆ ಬಂದಿದೆ. ಸಾವಿನ ಸರಾಸರಿ ಶೇ.12.7 ರಷ್ಟಿದೆ. ಸಾಮಾನ್ಯವಾಗಿ 50 ವರ್ಷಕ್ಕಿಂತ ಮೇಲ್ಪಟ್ಟ ಮಹಿಳೆಯರಲ್ಲಿ ಸ್ತನ ಕ್ಯಾನ್ಸರ್ ಉಂಟಾಗುವ ಸಾಧ್ಯತೆಗಳಿದ್ದರೂ ಇತ್ತೀಚಿನ ದಿನಗಳಲ್ಲಿ ತಾರುಣ್ಯದಲ್ಲೂ ಕ್ಯಾನ್ಸರ್ ಆವರಿಸುತ್ತಿದೆ. ಇದಕ್ಕೆ ಕ್ಯಾನ್ಸರ್ ಕುರಿತ ಅರಿವು, ಮುಂಜಾಗ್ರತೆ ವಹಿಸದೇ ಇರುವುದೇ ಕಾರಣವಾಗಿದೆ. ಈ ನಿಟ್ಟಿನಲ್ಲಿ ಅಕ್ಟೋಬರ್ ತಿಂಗಳು ಜಾಗತಿಕ ಸ್ತನ ಕ್ಯಾನ್ಸರ್ ಮಾಸವಾಗಿ ಆಚರಿಸುವ ಸಂದರ್ಭದಲ್ಲಿ ಉಚಿತ ಆಧುನಿಕ ಸ್ಕ್ರೀನಿಂಗ್ ನಡೆಸಲಾಗುತ್ತಿದೆ ಎಂದರು.



ಪತ್ರಿಕಾಗೋಷ್ಠಿಯಲ್ಲಿ ಹೊರಟ್ಟಿ ಮಾತನಾಡುತ್ತಿರುವುದು.

ಅವ್ವ ಸೇವಾ ಟ್ರಸ್ಟ್ ವತಿಯಿಂದ ನಡೆಯಲಿರುವ ಶಿಬಿರದಲ್ಲಿ ದಿನಕ್ಕೆ 50 ಮಂದಿ ಶಿಕ್ಷಕಿಯರನ್ನು ಪರೀಕ್ಷೆಗೆ ಒಳಪಡಿಸಲಾಗುವುದು. ಒಬ್ಬರ ಥರ್ಮಲ್ ಪರೀಕ್ಷೆಗೆ ₹ 7 ಸಾವಿರದಿಂದ ₹10 ಸಾವಿರ ವೆಚ್ಚವಾಗಲಿದೆ. ಕ್ಯಾನ್ಸರ್ ಲಕ್ಷಣ ಇದ್ದವರಿಗೆ ಮುಂದಿನ ಚಿಕಿತ್ಸೆಗೆ ಸಲಹೆ, ಸೂಚನೆ ನೀಡಲಾಗುವುದು ಎಂದು ಹೇಳಿದರು.

ಪತ್ರಿಕಾಗೋಷ್ಠಿಯಲ್ಲಿ ಅವ್ವ ಸೇವಾ ಟ್ರಸ್ಟ್‌ನ ಖಜಾಂಚಿ ರಾಜೇಂದ್ರ ರಡ್ಡಿ, ಕಾರ್ಯದರ್ಶಿ ಶಶಿ ಸಾಲಿ ಇದ್ದರು.